# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 534 (659)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಡಾ: ವೈ. ಎ. ನಾರಾಯಣಸ್ವಾಮಿ(ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಅರಮನೆ ಮೈದಾನದಲ್ಲಿರುವ ಕಲ್ಯಾಣ ಮಂಟಪಗಳ ಬಗ್ಗೆ

(ಅ) ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಕಲ್ಯಾಣ ಮಂದಿರ/ಕನ್ವೆನ್ಷನ್ ಸೆಂಟರ್‌ಗಳಲ್ಲಿ ಸಾರ್ವಜನಿಕ ಸಮಾರಂಭ /ಸಮಾವೇಶ ನಡೆಸಲು ಇರುವ ಕಟ್ಟಡಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಮೇಲ್ಕಂಡ ಕಟ್ಟಡಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು; (ಬಾಡಿಗೆ, ವಿವಿಧ ರೀತಿಯ ತೆರಿಗೆ ಶುಲ್ಕಗಳ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಈ ಸಭೆ/ಸಮಾರಂಭಗಳನ್ನು ನಡೆಸಲು ಅನುಮೋದನೆ ನೀಡಲು ಇರುವ ಮಾನದಂಡಗಳೇನು ;

(ಈ) ಇಲ್ಲಿ ನಡೆಯುವ ಸಭೆ/ಸಮಾರಂಭಗಳಿಂದ ವಾಹನ ದಟ್ಟಣೆಯುಂಟಾಗಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಈ ಅರಮನೆ ಮೈದಾನದಲ್ಲಿ ಯಾವುದೇ ಸಮಾರಂಭಗಳಿಗೆ ಅನುಮತಿ ನೀಡದಿರಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?